<u>ಅಸಲು ದಾವಾಃ-</u> **103/2025** ಪಿ.ಡಬ್ಲ್ಯೂ:- **1**

ದಿನಾಂಕಃ **08.10.2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ವಾದಿಗಳ ಪರ ವಕೀಲರಿಂದ:-</u>

ನಾನು ಈ ದಾವೆಯಲ್ಲಿ ವಾದಿ ಆಗಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

ವಂಶವೃಕ್ಷವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**1** ಎಂದು ಗುರುತಿಸಲಾಯಿತು.

ನನ್ನ ತಂದೆಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**2** ಎಂದು ಗುರುತಿಸಲಾಯಿತು.

ಪಟ್ಟಣ ಪಂಚಾಯಿತಿ ನ್ಯಾಮತಿಯವರು ನೀಡಿದ ಹಿಂಬರಹವನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**3** ಎಂದು ಗುರುತಿಸಲಾಯಿತು.

ಖಾತಾ ಎಕ್ಸ್ ಟ್ರಕ್ ನ ಎರಡು ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ನಿಪಿ-**4** ಮತ್ತು **5** ಎಂದು ಗುರುತಿಸಲಾಯಿತು.

ಡಿಮ್ಯಾಂಡ್ ರಿಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ -**6** ಎಂದು ಗುರುತಿಸಲಾಯಿತು.

ನ್ಯಾಮತಿ ಗ್ರಾಮ ಪಂಚಾಯಿತಿರವರು ನೀಡಿದ ನಿವೇಶನದ ಸೇಲ್ಸ್ ಸರ್ಟಿಫಿಕೇಟ್ ನ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**7** ಎಂದು ಗುರುತಿಸಲಾಯಿತು.

ನಮೂನೆ 3 ರ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**8** ಎಂದು ಗುರುತಿಸಲಾಯಿತು.

ದಿಃ 19-02-2024 ರ ಶುದ್ಧ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸುತ್ತಿದ್ದು ಅದನ್ನು ನಿಪಿ-**9** ಎಂದು ಗುರುತಿಸಲಾಯಿತು.

ಪ್ರತಿವಾದಿಯ ಪರ ವಕೀಲರು ಹಾಜರಿದ್ದು ಮತ್ತು ಪ್ರತಿವಾದ ಪತ್ರ ಸಲ್ಲಿಸಿರುವುದಿಲ್ಲ ಆದರೆ ನ್ಯಾಯುತ ದೃಷ್ಟಿಯಿಂದ ಪಾಟೀ ಸವಾಲಿಗೆ ಕಾಲಾವಕ ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.